ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 20–09–2019

# ಪತ್ರಿಕಾ ಆಮಂತ್ರಣ

1. ಆಯುಷ್ಮಾನ್ ಭಾರತ್ –ಆರೋಗ್ಯ ಕರ್ನಾಟಕ ಯೋಜನೆಯ ವಾಕಥಾನ್ / ಜಾಥಾ ಕಾರ್ಯಕ್ರಮ :

ಚಾಲನೆ :

ಶ್ರೀರಾಮುಲು,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು,

ದಿನಾಂಕ : 21–09–2019 ಶನಿವಾರ ಬೆಳಿಗ್ಗೆ 7–30 ಗಂಟೆಗೆ

ಸ್ಥಳ : ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ, ಶಿವಾಜಿನಗರ ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಸೆಪ್ಟೆಂಬರ್ 20 ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 22–09–2019 ರ ಭಾನುವಾರದಂದು ಶ್ರೀ

ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಸುನಿಧಿ ಗುರುದತ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಭರತಾಂಜಲಿ ನಾಟ್ಯ ಶಾಲೆ ತಂಡದವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ‘ಆಯುಷ್ಮಾನ್ ಬಾರತ್-ಆರೋಗ್ಯ ಕರ್ನಾಟಕ’
## ಪಾಕ್ಷಿಕ ಆಚರಣೆ

ಬೆಂಗಳೂರು, ಸೆಪ್ಟೆಂಬರ್ 20 ಕರ್ನಾಟಕ ವಾರ್ತೆ)

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಗೆ ಒಂದು ವರ್ಷ ಪೂರೈಸುತ್ತಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಯೋಜನೆಯ ಕುರಿತು ಅರಿವು ಹೆಚ್ಚಿನ ಮೂಡಿಸಲು ಹಾಗೂ ಫಲಾನುಭವಿಗಳು ಈ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಪ್ರೇರೇಪಿಸಲು ರಾಜ್ಯದಲ್ಲಿ ಪಾಕ್ಷಿಕ ಆಚರಣೆ ನಡೆಸಲಾಗುತ್ತಿದೆ.

ಈ ಪಾಕ್ಷಿಕ ಆಚರಣೆ ಕಾರ್ಯಕ್ರಮದ ಅಂಗವಾಗಿ ರಾಜ್ಯದ್ಯಂತ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ, ತಾಲೂಕು ಕೇಂದ್ರಗಳಲ್ಲಿ ವಾಕಥಾನ್, ಪ್ರಭಾತ್ ಪೇರಿ, ಜಾಥಾ ಕಾರ್ಯಕ್ರಮಗಳು, ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ದಿನಾಚರಣೆ ಮುಂತಾದ ಪ್ರಚಾರ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

ಬೆಂಗಳೂರಿನಲ್ಲಿ ದಿನಾಂಕ: 21.09.2019 ರಂದು ಬೆಳಿಗ್ಗೆ 7.30 ಗಂಟೆಗೆ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ವಾಕಥಾನ್/ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ವಾಕಥಾನ್/ಜಾಥಾ ಕಾರ್ಯಕ್ರಮಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ. ಬಿ. ಶ್ರೀರಾಮುಲು ರವರು ಚಾಲನೆ ನೀಡುತ್ತಾರೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ವಾಕಥಾನ್/ಜಾಥಾ ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು, ಸಿಬ್ಬಂದಿಗಳು, ವೈದ್ಯರು, ವೈದ್ಯಕೀಯ ವಿದ್ಯಾರ್ಥಿಗಳು, ಅರೆ ವೈದ್ಯಕೀಯ ಸಿಬ್ಬಂದಿಗಳು, ಶುಶ್ರೂಷಕರು ಮತ್ತು ವಿದ್ಯಾರ್ಥಿಗಳೂ ಸೇರಿದಂತೆ ಹೆಚ್ಚಿನ ಜನರು ಭಾಗವಹಿಸುತ್ತಿದ್ದಾರೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ವಾಕಥಾನ್/ಜಾಥಾ ಕಾರ್ಯಕ್ರಮವು ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಿಂದ ಆರಂಭಗೊಂಡು ಪ್ರಮುಖ ರಸ್ತೆಯಲ್ಲಿ ಸಾಗಿ ಘೋಶಾ ಆಸ್ಪತ್ರೆ, ಶಿವಾಜಿನಗರ ಇಲ್ಲಿ ಅಂತ್ಯಗೊಳ್ಳುತ್ತದೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ದಿನಾಚರಣೆಯ ಅಂಗವಾಗಿ ದಿನಾಂಕ: 23.09.2019 ರಂದು ಬೆಳಿಗ್ಗೆ 10.30 ಗಂಟೆಗೆ ಸಿ.ವಿ.ರಾಮನ್ ಆಸ್ಪತ್ರೆ, ಇಂದಿರಾ ನಗರ, ಬೆಂಗಳೂರು ಇಲ್ಲಿ ಯೋಜನೆಯ 'ಫಲಾನುಭವಿಗಳೊಂದಿಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಸಂವಾದ' ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಹಾಗೂ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ದಿನಾಚರಣೆಯ ಅಂಗವಾಗಿ ಸಾರ್ವಜನಿಕರಿಗೆ ಆರೋಗ್ಯ ತಪಾಸಣೆ ನಡೆಸಲು ಬೃಹತ್ ಆರೋಗ್ಯ ಶಿಬಿರವನ್ನು ನಡೆಸಲಾಗುತ್ತಿದೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ದಿನಾಚರಣೆಯ ಅಂಗವಾಗಿ ದಿನಾಂಕ: 23.09.2019 ರಂದು ಬೆಳಿಗ್ಗೆ 10.30 ಗಂಟೆಗೆ ನಾಡಿನ ಹೆಸರಾಂತ ಸಂಸ್ಥೆಯಾದ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ಪರಿಕಲ್ಪನೆಯನ್ನು ಬಿಂಬಿಸುವಂತಹ ಚಿತ್ರಕಲಾ ಸ್ಪರ್ಧೆ ನಡೆಸಲಾಗುತ್ತಿದೆ.

ಯೋಜನೆಯ ಪ್ರಮುಖಾಂಶಗಳು:

'ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ' ಯೋಜನೆಯು ರಾಜ್ಯದ ಎಲ್ಲ ನಿವಾಸಿಗಳಿಗೆ ಆರೋಗ್ಯ ಸೇವೆ ಒದಗಿಸುವ ಮಹತ್ವದ ಯೋಜನೆಯಾಗಿದೆ. ಯೋಜನೆಯ ಅಡಿಯಲ್ಲಿ 1650 ಚಿಕಿತ್ಸಾ ವಿಧಾನಗಳಿಗೆ ಚಿಕಿತ್ಸೆ ಲಭ್ಯವಿದೆ. ಬಿಪಿಎಲ್ ಪಡಿತರ ಕಾರ್ಡು ಹೊಂದಿರುವವರು ಹಾಗೂ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಲ್ಲಿ ನೋಂದಾಯಿತವಾಗಿರುವ ಫಲಾನುಭವಿಗಳಿಗೆ ಒಂದು ವರ್ಷಕ್ಕೆ ರೂ.5.00 ಲಕ್ಷಗಳವರೆಗೆ ಉಚಿತ ಚಿಕಿತ್ಸೆ ಲಭ್ಯ.

ಎಪಿಎಲ್ ಕುಟುಂಬಗಳಿಗೆ ಸಹ-ಪಾವತಿ ಆಧಾರದ ಮೇಲೆ ಸರ್ಕಾರಿ ಪ್ಯಾಕೇಜ್ ದರದ 30% ರಷ್ಟು ಚಿಕಿತ್ಸಾ ವೆಚ್ಚ ಲಭ್ಯವಿದ್ದು, ವಾರ್ಷಿಕ ಮಿತಿ ಪ್ರತಿ ಕುಟುಂಬಕ್ಕೆ ರೂ.1.50 ಲಕ್ಷ ಇರುತ್ತದೆ.

ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಹಾಜರುಪಡಿಸಿ ಚಿಕಿತ್ಸೆ ಪಡೆದುಕೊಳ್ಳಬಹುದು. ಉಷಾರಿಲ್ಲದಾಗ ಜನರು ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಬೇಕು. ಅಲ್ಲಿ ಆರೋಗ್ಯ ತಪಾಸಣೆ ಮಾಡಿ ಚಿಕಿತ್ಸೆ ನೀಡುತ್ತಾರೆ. ಒಂದೊಮ್ಮೆ ಚಿಕಿತ್ಸೆ ಲಭ್ಯವಿಲ್ಲದಿದ್ದರೆ ರೋಗಿಗೆ ರೆಫರಲ್ ನೀಡುತ್ತಾರೆ. ರೆಫರಲ್ ಪಡೆದುಕೊಂಡ ರೋಗಿಯು ತಾನು ಇಚ್ಚಿಸುವ ಯಾವುದೇ ನೋಂದಾಯಿತ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದು. ರಸ್ತೆ ಅಪಘಾತ ಸೇರಿದಂತೆ 169 ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ನೋಂದಾಯಿತ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬಹುದು

ಆರೋಗ್ಯ ಕಾರ್ಡ್‌ನ್ನು (ಎಬಿ-ಎಆರ್‌ಕೆ) ಸರ್ಕಾರಿ ಆಸ್ಪತ್ರೆಗಳಲ್ಲಿ ರೂ.10/- ಶುಲ್ಕ ನೀಡಿ ಪಡೆದುಕೊಳ್ಳಬಹುದು. ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಸೇವಾ ಸಿಂಧು ಕೇಂದ್ರಗಳಲ್ಲಿ ಕಾಗದದ ಕಾರ್ಡಿಗೆ ರೂ.10/- ಪ್ಲಾಸ್ಟಿಕ್ ಕಾರ್ಡಿಗೆ ರೂ. 35/- ಶುಲ್ಕ ನೀಡಿ ಪಡೆದುಕೊಳ್ಳಬಹುದು. ಆಧಾರ್ ಕಾರ್ಡ್ ಮತ್ತು ಪಡಿತರ ಕಾರ್ಡ್‌ಗಳನ್ನು ಹಾಜರು ಪಡಿಸಿ ಆರೋಗ್ಯ ಕಾರ್ಡ್ ಪಡೆಯಬಹುದು. ಮಾಹಿತಿಗಾಗಿ ಹತ್ತಿರದ ಸರ್ಕಾರಿ ಆಸ್ಪತ್ರೆ, ತಾಲೂಕು ಆಸ್ಪತ್ರೆಗಳು, ಜಿಲ್ಲಾ ಆಸ್ಪತ್ರೆಗಳು, ಸಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳು, ಆರೋಗ್ಯ ಸಹಾಯವಾಣಿ 104, ಟೋಲ್ ಫ್ರೀ ಸಂಖ್ಯೆ: 1800 425 8330 ಮತ್ತು 1800 425 2646 ಹಾಗೂ ವೆಬ್‌ಸೈಟ್: www.sast.gov.in, www.arogya.karnataka.gov.in ಅನ್ನು ಸಂಪರ್ಕಿಸಬಹುದು.

ಯೋಜನೆಯ ಪ್ರಗತಿ

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಇಲ್ಲಿಯವರೆಗೆ 2,68,165 ಫಲಾನುಭವಿಗಳಿಗೆ ಚಿಕಿತ್ಸೆ ಒದಗಿಸಲು ಅನುಮೋದನೆ ನೀಡಲಾಗಿದೆ. ಇದಕ್ಕಾಗಿ ಒಟ್ಟು ರೂ.729.62 ಕೋಟಿಗಳ ವೆಚ್ಚವಾಗಿರುತ್ತದೆ. ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಈ ವರೆಗೆ 2509 ಸರ್ಕಾರಿ ಆಸ್ಪತ್ರೆಗಳು ಮತ್ತು 434 ಖಾಸಗಿ ಆಸ್ಪತ್ರೆಗಳು ಸೇರಿ ಒಟ್ಟು 2943 ಆಸ್ಪತ್ರೆಗಳನ್ನು ನೋಂದಾಯಿಸಿಕೊಳ್ಳಲಾಗಿದೆ.

# ವಸತಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 20 ಕರ್ನಾಟಕ ವಾರ್ತೆ)

ವಸತಿ ಸಚಿವ ಶ್ರೀ ವಿ. ಸೋಮಣ್ಣ ಅವರು ಸೆಪ್ಟೆಂಬರ್ 20 ಮತ್ತು 21 ರಂದು ಮೈಸೂರು ಮತ್ತು ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಸೆಪ್ಟೆಂಬರ್ 21 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

# ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 20 ಕರ್ನಾಟಕ ವಾರ್ತೆ)**

**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಬೆಳಗಾವಿ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಜಗದೀಶ್ ಶೆಟ್ಟರ ಅವರು ಸೆಪ್ಟೆಂಬರ್ 21 ಮತ್ತು 22 ರಂದು ಹುಬ್ಬಳ್ಳಿಯಲ್ಲಿ ಪ್ರವಾಸ ಕೈಗೊಳ್ಳುವರು.**

## ಗ್ರಾಹಕ ಸಂವಾದ ಸಭೆ

**ಬೆಂಗಳೂರು, ಸೆಪ್ಟೆಂಬರ್ 20 ( ಕರ್ನಾಟಕ ವಾರ್ತೆ ) :**

ಬೆಂಗಳೂರು ವಿದ್ಯುತ್ ಕಂಪೆನಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಅದರನ್ವಯ, ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 21.09.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಬೇಕೆಂದು ಬೆವಿಕಂ ಕೋರಿದೆ

## 2019 ನೇ ಸಾಲಿನ ಸಂಗೀತ ವಿಭಾಗದ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 20 ( ಕರ್ನಾಟಕ ವಾರ್ತೆ ) :**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2019 ನೇ ಸಾಲಿನ ಸಂಗೀತ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿಗೆ ಮೈಸೂರಿನ ಪ್ರೊ. ಬಿ.ಎಸ್. ವಿಜಯರಾಘವನ್, ಅವರನ್ನು ಆಯ್ಕೆ ಮಾಡಿದೆ. ನಿಜಗುಣ ಪುರಂದರ ಪ್ರಶಸ್ತಿಗೆ ಶ್ರೀಮತಿ ಗೌರಿಕುಪ್ಪಸ್ವಾಮಿ ಮೈಸೂರು, ಸಂತ ಶಿಶುನಾಳ ಪ್ರಶಸ್ತಿಗೆ ಸುಗಮ ಸಂಗೀತ ಕ್ಷೇತ್ರದ ಧಾರವಾಡದ ಪಂ. ವಾದಿರಾಜ ನಿಂಬರಗಿ ಹಾಗೂ ಕುಮಾರವ್ಯಾಸ ಪ್ರಶಸ್ತಿಗೆ ಗಮಕ ಕ್ಷೇತ್ರದ ಶ್ರೀಮತಿ ಗಂಗಮ್ಮ ಕೇಶವಮೂರ್ತಿರವರನ್ನು ಆಯ್ಕೆ ಮಾಡಲಾಗಿದೆ. ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿಯನ್ನು ದಿನಾಂಕ: 29-09-2019 ರಂದು ನಡೆಯುವ ಮೈಸೂರು ದಸರಾ ಉತ್ಸವದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯುಡಿಯೂರಪ್ಪ ಅವರು ಪ್ರದಾನ

ಮಾಡಲಿದ್ದಾರೆ. ಉಳಿದ ಪ್ರಶಸ್ತಿಗಳ ಪ್ರದಾನ ದಿನಾಂಕವನ್ನು ನಂತರ ನೀಡಲಾಗುವುದು. ಈ ಪ್ರಶಸ್ತಿಗಳ ಮೊತ್ತ ತಲಾ 5.00 ಲಕ್ಷಗಳ ಗೌರವಧನ ಒಳಗೊಂಡಿದೆ ಎಂದು ಇಲಾಖೆ ಪ್ರಕಟಣೆ ತಿಳಿಸಿದೆ.

**KARNATAKA STATE GOVERNMENT KUMBARA EMPLOYEES' WELFARE ASSOCIATION ORGANISES PRATIBHA PURASKAR FOR STUDENTS AND FELICITATION FOR ACHIEVERS ON SEPTEMBER 22 IN CITY**

BENGALURU, SEPTEMBER 20 :

The Karnataka State Government Kumbara Employees' Welfare Association has organized *Pratibha Puraskar* for the talented students of the community and Felicitation for Achievers in various fields of their members on September 22 at Sri Gururaja Kalyana Mantap on Crescent Road in Bengaluru.

The Deputy Chief Minister Mr C N Ashwath Narayan, who also holds the portfolios of Higher Education, Information Technology and Bio-Technology, will inaugurate the day-long function, at which the Deputy Chief Minister Mr Govind M Karajola, who holds the portfolios of Public Works and Social Welfare, will release a book on OTHER BACKWARD CLASSES.

Eminent personalities of the pottery community from Goa and Maharashtra, besides, Karnataka are scheduled to participate in this special function.

**ಸೆಪ್ಟೆಂಬರ್ 22 ರಂದು ಕರ್ನಾಟಕ ರಾಜ್ಯ ಸರ್ಕಾರಿ ಕುಂಬಾರ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ**

**ಬೆಂಗಳೂರು, ಸೆಪ್ಟೆಂಬರ್ 20 :**

**ಕರ್ನಾಟಕ ರಾಜ್ಯ ಸರ್ಕಾರಿ ಕುಂಬಾರ ನೌಕರರ ಕ್ಷೇಮಾಭಿವೃದ್ಧಿ ಸಂಘವು ಸೆಪ್ಟೆಂಬರ್ 22 ರಂದು ನಗರದ ಕ್ರೆಸೆಂಟ್ ರಸ್ತೆಯ ಶ್ರೀ ಗುರುರಾಜ ಕಲ್ಯಾಣ ಮಂಟಪದಲ್ಲಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ತನ್ನ ಸದಸ್ಯರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಿದೆ.**

**ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಖಾತೆ ಹೊತ್ತ ಉಪ ಮುಖ್ಯಮಂತ್ರಿ ಡಾ ಸಿ ಎನ್ ಅಶ್ವಥನಾರಾಯಣ ಅವರು ಉದ್ಘಾಟಿಸಲಿರುವ ಈ ದಿನವಿಡೀ ಕಾರ್ಯಕ್ರಮದಲ್ಲಿ**

ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಖಾತೆ ಹೊತ್ತ ಉಪ ಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ ಅವರು ಇತರೆ ಹಿಂದುಳಿದ ವರ್ಗಗಳು ಕುರಿತ ಪುಸ್ತಕವನ್ನು ಬಿಡುಗಟೆ ಮಾಡಲಿದ್ದಾರೆ.

ಕರ್ನಾಟಕ ಮಾತ್ರವಲ್ಲದೆ ಗೋವಾ, ಮಹಾರಾಷ್ಟ್ರ ರಾಜ್ಯಗಳಲ್ಲಿನ ಕುಂಬಾರಿಕಾ ಸಮುದಾಯದ ಗಣ್ಯರು ಈ ವಿಶೇಷ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

*****************